ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	76
ಮಾನ್ಯ ಸದಸ್ಯರ ಹೆಸರು	ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	01-02-2021
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಯಚೂರು ಜಿಲ್ಲೆಯ ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆಯಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು;	ಬಂದಿದೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ತಜ್ಞರು/ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದ್ದು, ವಿಶೇಷ ನೇಮಕಾತಿ ಸಮಿತಿ, ಅಧಿಸೂಚನೆ ಸಂಖ್ಯೆ:SRC/68/2019-20, ದಿನಾಂಕ:10-09-2020ರಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿ, ಈಗಾಗಲೇ ಮೂಲ ದಾಖಲೆಗಳನ್ನು ಪರಿಶೀಲಿಸಿಕೊಳ್ಳಲಾಗಿದೆ. ಸಮಾಲೋಚನೆಯ ಸಂದರ್ಭದಲ್ಲಿ ಖಾಲಿ ಇರುವ ಹುದ್ದೆಗಳನ್ನು ಪ್ರಚುರಪಡಿಸಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ.
ಆ	ರಾಯಚೂರು ಜಿಲ್ಲಾ ಆಸ್ಪತ್ರೆಯಲ್ಲಿ ಯಾವ ಯಾವ ತಜ್ಞ ವೈದ್ಯರ ಹುದ್ದೆ ಖಾಲಿ ಇದೆ? (ವಿವರ ಒದಗಿಸುವುದು)	ರಾಯಚೂರು ಜಿಲ್ಲಾ ಆಸ್ಪತ್ರೆಗೆ ಒಟ್ಟು 21 ತಜ್ಞ ವೈದ್ಯರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 16 ತಜ್ಞ ವೈದ್ಯರ ಹುದ್ದೆಗಳು ಖಾಲಿಯಿರುತ್ತದೆ.

ಆಕುಕ 02 ಹೆಚ್ಎಸ್‌ಡಿ 2021

(ಡಾ. ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು